**ಸಾಕ್ಷಿಯನ್ನು ದಿಃ 09.07.2026 ರಂದು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಂದುವರಿದ ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದಃ**

ನನಗೆ ಕಣ್ಣನ್ ಕರ್ಪಯ್ಯ ಕುಮಾರ ಎಂಬ ವೈದ್ಯರು ಚಿಕಿತ್ಸೆ ನೀಡಿದ್ದಾರೆ. ಯಾವ ವೈದ್ಯರು ನನ್ನ ಪರವಾಗಿ ಸಾಕ್ಷಿ ನುಡಿದಿದ್ದಾರೆ ಎಂದು ಹೆಸರು ಗೊತ್ತಿಲ್ಲ. ನಾನು ಈ ವರ್ಷದ ಜನವರಿ ಕೊನೆಯಲ್ಲಿ ಶಸ್ತ್ರಚಿಕಿತ್ಸೆಯಾಗಿದ್ದು, ಆ ನಂತರ ಒಮ್ಮೆ ಆಸ್ಪತ್ರೆಗೆ ಭೇಟಿ ನೀಡಿದ್ದೇನೆ. ಕಾಲಿನ ನರವನ್ನು ತೆಗೆದು ಕೈಗೆ ಅಳವಡಿಸಿದ್ದಾರೆ. ಆ ಬಗ್ಗೆ ದಾಖಲೆ ಹಾಜರುಪಡಿಸಿದ್ದೇನೆ. ನಾನು ದಾಖಲೆಗಳನ್ನು ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ನಿ.ಪಿ-16 ಮತ್ತು 17 ದಾಖಲೆಗಳು ಎರಡೂ ಸಹ ಒಂದೇ ಆಗಿವೆ ಎಂದರೆ ಸರಿಯಲ್ಲ. ಹಾಜರುಪಡಿಸಿರುವ ದಾಖಲೆಗಳಲ್ಲಿ ವೈದರ ಸಹಿ ಮತ್ತು ಸೀಲು ಇಲ್ಲ ಎಂದರೆ ಸರಿಯಲ್ಲ. ಜೆ.ಎಸ್.ಆಸ್ಪತ್ರೆಯ ಔಷಧಿ ಬಿಲ್ಲುಗಳಿಗೂ ಸಹ ದಿನಾಂಕ 12.02.2025 ರ ಬಿಲ್ಲುಗಳಿಗೂ ಸಹ ಸಹಿ ಇಲ್ಲ ಎಂದರೆ ಸರಿಯಲ್ಲ. ನಿ.ಪಿ-18 ರಲ್ಲಿಯೂ ಸಹ ಚಿಕಿತ್ಸೆ ನೀಡಿದ ವೈದ್ಯರ ಹೆಸರಿಲ್ಲ ಎಂದರೆ ನನಗೆ ಗೊತ್ತಿಲ್ಲ. ನಿ.ಪಿ-20 ರಲ್ಲಿಯ ಬಿಲ್ಲುಗಳಲ್ಲಿ ಯಾವ ಚಿಕಿತ್ಸೆಗೆ ಬಿಲ್ಲುಗಳು ನೀಡಿದ್ದಾರೆ ಎಂದು ನಮೂದಿಲ್ಲ ಎಂದರೆ ನನಗೆ ಗೊತ್ತಿಲ್ಲ. ಎದುರುದಾರರ ತಪ್ಪಿನಿಂದ ಅಪಘಾತ ಆಗದೇ ಇದ್ದರೂ ಸಹ ದಾಖಲೆಗಳನ್ನು ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ಆದ ಕಾರಣ ಎದುರುದಾರರ ಪರಿಹಾರ ನೀಡಲು ಬಾಧ್ಯರಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

**(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೇ.ಸರಿ ಇದೆ.**

**ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು**
**ಮತ್ತು ಎಂ.ಎ.ಸಿ.ಟಿ., ಮೈಸೂರು.**